ಕರ್ನಾಟಕ ಸರ್ಕಾರ

ದಿನಾಂಕ: 8-3-2017

# ಎಲ್ಲಾ ರಂಗಗಳಲ್ಲೂ ಮಹಿಳೆಯರಿಗೆ ಅವಕಾಶ, ಸವಲತ್ತು ನೀಡಲು ಸರ್ಕಾರ ಬದ್ಧ – ಮುಖ್ಯಮಂತ್ರಿ



ಬೆಂಗಳೂರು, ಮಾರ್ಚ್ 8 ,

ಎಲ್ಲಾ ರಂಗಗಳಲ್ಲೂ ಮಹಿಳೆಯರಿಗೆ ಅವಕಾಶ, ಸವಲತ್ತು ನೀಡಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಇಂದು ರವೀಂದ್ರ ಕಲಾಕ್ಷೇತ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಇತರ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

1901 ರಲ್ಲಿ ಅಮೇರಿಕಾದಲ್ಲಿ ಮೊದಲ ಮಹಿಳಾ ದಿನಾಚರಣೆ ನಡೆದಿತ್ತು. 2011 ರ ಜನಗಣತಿಯ ಪ್ರಕಾರ 1000 ಪುರುಷರಿಗೆ 973 ಮಹಿಳೆಯರಿದ್ದಾರೆ. ನಾವು ಹೆಣ್ಣು ಭ್ರೂಣಹತ್ಯೆಯನ್ನು ನಿಲ್ಲಿಸಬೇಕು. ಮಹಿಳೆಯರಿಗೆ ಪುರುಷರಂತೆ ಸಮಾನ ಅವಕಾಶ ಸಿಗಬೇಕು. ಕೆಲವರಿಗೆ ಪ್ರತಿಭೆ, ವಿದ್ಯೆಯಿದ್ದರೂ ಅವಕಾಶ ವಂಚಿತರಾಗಿದ್ದಾರೆ. ಎಸ್.ಎಸ್.ಎಲ್.ಸಿ., ಪಿ.ಯು.ಸಿ. ಪರೀಕ್ಷೆಗಳಲ್ಲೂ ಮಹಿಳೆಯರು ಮೇಲುಗೈ ಸಾಧಿಸಿದ್ದಾರೆ. ಸಮಾಜದಲ್ಲಿ ಲಿಂಗ ತಾರತಮ್ಯ, ಹೆಣ್ಣು ಭ್ರೂಣಹತ್ಯೆ ಮಹಿಳಾ ದೌರ್ಜನ್ಯವನ್ನು ಹೋಗಲಾಡಿಸುವಲ್ಲಿ ನಾವು ಪ್ರಯತ್ನಿಸಬೇಕು. ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರಿಗೆ ಅವಕಾಶಗಳು ಸಿಗಬೇಕು. ದೇಶ

ಸ್ವಾತಂತ್ರ್ಯ ದೊರೆತು 70 ವರ್ಷಗಳಾದರೂ ಸಹ ಅಸಮಾನತೆ ಮುಂದುವರೆದಿದೆ. ಸ್ವಾಮಿ ವಿವೇಕಾನಂದರು ಮಹಿಳೆಯರ ಅಭಿವೃದ್ಧಿಯಿಂದ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದರು. ಈಗಲೂ ಮಹಿಳೆಯರು ಬಸ್ ಚಾಲಕಿ, ಗಗನಸಖಿ ಹೀಗೆ ಹಲವು ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ. ಸರ್ಕಾರವು ಕಳೆದ 4 ವರ್ಷಗಳಿಂದ ಮಹಿಳೆಯರ ಅಭಿವೃದ್ಧಿಗೆ ಶ್ರಮಿಸುತ್ತಿದೆ. ಸಮೃದ್ಧಿ ಯೋಜನೆಯಡಿ ಸ್ವಂತ ವೃತ್ತಿ ಆರಂಭಿಸುವ ಮಹಿಳೆಯರಿಗೆ 10 ಸಾವಿರ ಸಬ್ಸಿಡಿ, 40 ಸಾವಿರ ಸಾಲದ ರೂಪದಲ್ಲಿ ನೀಡಲಾಗುತ್ತದೆ. ಸರ್ಕಾರ ಇದಕ್ಕೆ 10 ಕೋಟಿ ಮೀಸಲಿಟ್ಟಿದೆ.

ರಾಜ್ಯದಲ್ಲಿ ಒಂದೂವರೆ ಲಕ್ಷ ಮಹಿಳಾ ಸ್ವಯಂಸೇವಾ ಸಂಘಗಳಿದ್ದು, 22 ಲಕ್ಷ ಸದಸ್ಯರಿದ್ದಾರೆ. ಅವರಿಗೆ ಸುತ್ತು ನಿಧಿಯ ಮೊತ್ತವನ್ನು 5000 ದಿಂದ 25,000 ರೂ. ಗಳಿಗೆ ಹೆಚ್ಚಿಸಲಾಗಿದೆ. ಅಂತರ್ಜಾತಿಯ ವಿವಾಹಕ್ಕೆ 50,000 ರೂ. ಗಳ ಪ್ರೋತ್ಸಾಹ ಧನ ನೀಡಲಾಗುತ್ತಿದೆ.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕ ಭಾಷಣ ಮಾಡಿ ಮಾತನಾಡಿದ ಸಚಿವೆ ಉಮಾಶ್ರೀ ಇಲಾಖೆ ವತಿಯಿಂದ ಮಹಿಳೆಯರ ಸಬಲೀಕರಣ ಹತ್ತು ಹಲವು ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ಮಹಿಳೆಯರಿಗೆ ಬಡ್ಡಿರಹಿತ ಸಾಲ, ಮಂಗಳಮುಖಿಯರ ಏಳ್ಗೆ, ಆಸಿಡ್ ಸಂತ್ರಸ್ತರಿಗೆ ಸಹಾಯಧನ ಹಾಗೂ 3000 ರೂ.ಗಳ ಮಾಸಾಶನ, ಧನಶ್ರೀ ಯೋಜನೆಯಡಿ ಎಚ್.ಐ.ವಿ. ಸಂತ್ರಸ್ಥರಿಗೆ ಸಹಾಯಧನ ಸಮೃದ್ಧಿ ಯೋಜನೆಯಡಿ ಸ್ವಂತ ಉದ್ಯೋಗ ನಡೆಸುವವರಿಗೆ 10,000 ರೂ.ಗಳ ಸಹಾಯಧನ ಹೀಗೆ ಮಹಿಳೆಯರ ಏಳ್ಗೆಗೆ ಇಲಾಖೆ ಶ್ರಮಿಸುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಮಾತನಾಡಿದ ವಿಧಾನ ಪರಿಷತ್ ಸದಸ್ಯರು ಹಾಗೂ ಮಹಿಳಾ ಮತ್ತು ಮಕ್ಕಳ ಶೋಷಣೆ, ದೌರ್ಜನ್ಯ ಅತ್ಯಾಚಾರ ತಡೆ ಹಾಗೂ ವರದಿ ನೀಡುವ ತಜ್ಞರ ಸಮಿತಿ ಅಧ್ಯಕ್ಷರಾದ ವಿ. ಎಸ್. ಉಗ್ರಪ್ಪ ಮಾತನಾಡಿ ಮಹಿಳೆಯರಿಗೆ ಸಮಾಜದಲ್ಲಿ ಸಮಾನ ಅವಕಾಶಗಳು ಸಿಗಬೇಕು. ಸಂವಿಧಾನದಲ್ಲಿ ಸಹ ಲಿಂಗತಾರತಮ್ಯ ಮಾಡಬಾರದೆಂಬ ಉಲ್ಲೇಖವಿದೆ. ಮಹಿಳೆಯರ ಮೇಲಿನ ಶೋಷಣೆ, ದೌರ್ಜನ್ಯ ಅತ್ಯಾಚಾರಗಳು ನಿಲ್ಲುವವರೆಗೂ ಉತ್ತಮ ಸಮಾಜದ ನಿರ್ಮಾಣ ಸಾಧ್ಯವಿಲ್ಲ ಎಂದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀಬಾಯಿ, ಮಹಿಳೆಯರು ದಿಟ್ಟ ನಿಲುವನ್ನು ಹೊಂದಿ, ಧೈರ್ಯವಂತರಾಗಬೇಕು. ವರದಕ್ಷಿಣೆ, ಭ್ರೂಣಹತ್ಯೆ, ಲಿಂಗತಾರತಮ್ಯಗಳಿಂದ ಮಹಿಳೆಯರ ನೈತಿಕ ಮೌಲ್ಯ ಕುಸಿಯುತ್ತವೆ. ಕಲಬುರಗಿಯಲ್ಲಿ ಸುಮಾರು 2200 ಮಹಿಳೆಯರ ಗರ್ಭಕೋಶ ಕಸಿ ನಡೆಸಲಾಗಿದ್ದು, ಅವರ ಸ್ಥಿತಿ

ಶೋಚನೀಯವಾಗಿದ್ದು, ಅವರಿಗೆ ಸ್ವಯಂ ಉದ್ಯೋಗ ಕಲ್ಪಿಸಿಕೊಡಬೇಕೆಂದು ಸಚಿವರಲ್ಲಿ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮಹಿಳೆಯರ ಪರ ಶ್ರಮಿಸಿದ 5 ಸಂಸ್ಥೆಗಳಿಗೆ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ, ಅತ್ಯುತಮ್ಮ ಸ್ತ್ರೀಜಾಗೃತಿ ಮೂಡಿಸಿದ ಮಹಿಳೆಯರಿಗೆ, ಅತ್ಯುತ್ತಮ ಸ್ತ್ರೀಶಕ್ತಿ ಸಂಘಗಳಿಗೆ, ತಾಲ್ಲೂಕು ಮಟ್ಟದ ಸಂಸ್ಥೆಗಳಿಗೆ, ಅಂತರರಾಷ್ಟ್ರೀಯ ಈಜುಪಟು ರೇವತಿ ನಾಯಕ್ ಅವರಿಗೆ, ಬಳ್ಳಾರಿಯಲ್ಲಿ ಮಹಿಳೆಯರ ಕಳ್ಳಸಾಗಣೆ ನಿಗ್ರಹ ಮಾಡಿದ 43 ಸಂತ್ರಸ್ತರನ್ನು ಕಾಪಾಡಿದ ಪೊಲೀಸ್ ಅಧಿಕಾರಿಗಳ ಹಾಗೂ ಸಿಬ್ಬಂದಿಗಳಿಗೆ ಈ ಸಂದರ್ಭದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವ ಕೆ. ಜೆ. ಜಾರ್ಜ್, ನಾಮ ನಿರ್ದೇಶಿತ ವಿಧಾನಸಭಾ ಸದಸ್ಯರಾದ ವಿನಿಶಾ ನಿರೋ, ಜವಾಹರ ಬಾಲಭವನದ ಅಧ್ಯಕ್ಷರಾದ ಡಾ. ಅಂಜಲಿ ನಿಂಬಾಳ್ಕರ್, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಭಾರತಿ ಶಂಕರ್, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಅಧ್ಯಕ್ಷರಾದ ಡಾ. ಕೃಪಾ ಅಮರ್ ಆಳ್ವಾ, ಕಂಠೀರವ ಸ್ಟುಡಿಯೋ ಅಧ್ಯಕ್ಷರಾದ ಅಶ್ವಿನಿ ಕೃಷ್ಣಮೂರ್ತಿ, ಕರ್ನಾಟಕ ಕರಕುಶಲ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಕಮಲಮ್ಮ. ವಿಧಾನ ಪರಿಷತ್ ಸದಸ್ಯರಾದ ವೀಣಾ ಅಚ್ಚಯ್ಯ, ಅನಿವಾಸಿ ಭಾರತೀಯ ಒಕ್ಕೂಟದ ಅಧ್ಯಕ್ಷರಾದ ಡಾ. ಆರತಿ ಕೃಷ್ಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ಉಮಾ ಮಹಾದೇವನ್, ನಿರ್ದೇಶಕರಾದ ದೀಪ ಎಂ ಹಾಗೂ ಇತರರು ಉಪಸ್ಥಿತರಿದ್ದರು.

ಎಂಆರ್‌ಎಂ:ಕೆಎನ್‌ಕೆ:ಜಿಪಿಆರ್

# ಮಹಿಳೆಯರಿಗೆ ಪುರುಷರಷ್ಟೇ ಸಮಾನ ಅವಕಾಶ ಸಿಗಬೇಕು – ಮುಖ್ಯಮಂತ್ರಿ




ಬೆಂಗಳೂರು, ಮಾರ್ಚ್ 8

ಲೋಕಸಭೆ ಮತ್ತು ವಿಧಾನಸಭೆಯಲ್ಲಿ ಶೇ. 33 ರಷ್ಟು ಮೀಸಲಾತಿ, ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿಗಳಲ್ಲಿ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಶೇ 50 ರಷ್ಟು ಮೀಸಲಾತಿಯನ್ನು ಮಹಿಳೆಯರಿಗೆ ನೀಡಲಾಗಿದೆ. ಮಹಿಳೆಯರಿಗೆ ಸಮಾನವಾದ ಅವಕಾಶ ಸಿಕ್ಕಿದಾಗ ಮಾತ್ರ ನಾಡಿನ, ದೇಶದ ಸರ್ವತೋಮುಖ ಅಭಿವೃದ್ಧಿ ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು , ಅಂದು ಬೇರೆ ಬೇರೆ ಸಮುದಾಯದ ಜನರು ಶೋಷಣೆ ಅನುಭವಿಸಿದ ರೀತಿಯಲ್ಲೇ ಮಹಿಳೆಯರು ಕೂಡಾ ಶೋಷಣೆಗೆ ಒಳಗಾಗುತ್ತಿದ್ದಾರೆ ಎಂದು ಸಮಾಜವಾದಿ, ದೇಶಕಂಡ ಶ್ರೇಷ್ಠ ರಾಜಕಾರಣಿ ಲೋಹಿಯಾ ಅವರು ಹೇಳುತ್ತಿದ್ದರು ಎಂದು ಸಮಾರಂಭದಲ್ಲಿ ನೆನಪಿಸಿಕೊಂಡರು.

ಈ ವರ್ಷದ ಘೋಷ ವಾಕ್ಯ "ಮಹಿಳೆಯರು ಬದಲಾವಣೆಯತ್ತ ಧೈರ್ಯದಿಂದ ಮುನ್ನುಗಿ" ಎಂಬುದು. ನಮ್ಮ ರಾಜ್ಯದಲ್ಲಿ ಬಹಳಷ್ಟು ಮಹಿಳೆಯರು ಶ್ರೇಷ್ಠ ಕೈಗಾರಿಕೋದ್ಯಮಿಗಳಾಗಿ ಹೊರಹೊಮ್ಮಿದ್ದಾರೆ ಮತ್ತು ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ್ದಾರೆ ಅವರಿಗೆಲ್ಲ ನನ್ನ ಧನ್ಯವಾದಗಳು ಎಂದರು.

ದೇಶಕ್ಕೆ ಸ್ವಾತಂತ್ರ್ಯ ಬಂದು ಸುಮಾರು 70 ವರ್ಷವಾದರೂ ಸಮಾಜದಲ್ಲಿ ಲಿಂಗ ತಾರತಮ್ಯವಿದೆ. ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಬೇಕಾದರೆ ಮಹಿಳೆಯರಿಗೆ ಹೆಚ್ಚು ಅವಕಾಶ ನೀಡಬೇಕು. ನಮ್ಮ ಸರ್ಕಾರ ಕೈಗಾರಿಕಾ ನೀತಿ ಹೊಸ ಯೋಜನೆಯನ್ನು

ತಂದಿದ್ದು ಮಹಿಳಾ ಕೈಗಾರಿಕೋದ್ಯಮಿಗಳಿಗೆ ಹೆಚ್ಚಿನ ಪ್ರಾಶಸ್ತ್ಯ ನೀಡಲಾಗಿದೆ. ದೇಶದಲ್ಲಿಯೇ ನಮ್ಮ ರಾಜ್ಯದ ಕೈಗಾರಿಕಾ ನೀತಿಯು ಉತ್ತಮವಾಗಿದೆ ಎಂದು ಅವರು ತಿಳಿಸಿದರು.

ಈ ಸಮಾರಂಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಕರ್ಯ ಸಚಿವ ಆರ್.ವಿ. ದೇಶಪಾಂಡೆ, ಸರ್ಕಾರದ ಅಪರ ಮುಖ್ಯ ಪ್ರಧಾನ ಕಾರ್ಯದರ್ಶಿ ಶ್ರೀಮತಿ ರತ್ನಪ್ರಭಾ ಸೇರಿದಂತೆ ಅನೇಕ ಮಹಿಳಾ ಕೈಗಾರಿಕೋದ್ಯಮಿಗಳು ಉಪಸ್ಥಿತರಿದ್ದರು.

ಎಂಅರ್ಎಂ:ಕೆಎನ್ವಿ:ಜಿಪಿಆರ್.

-----------